ಬಂದಲ್ಲಿ ಸಂಬಂಧಪಟ್ಟ ಗುತ್ತಿಗೆದಾರರ ಮೇಲೆ ಟೆಂಡರ್ ನಿಯಮಾನುಸಾರ ಕ್ರಮ ಜರುಗಿಸಲಾಗುವುದು

ಇ) ಡಾಂಬರೀಕರಣ ಕೆಲಸ ಮಾತ್ರ ಇರುವುದರಿಂದ ಸದ್ಯಕ್ಕೆ ಮಳೆಗಾಲ ಪ್ರಾರಂಭವಾಗಿದ್ದು, ಮಳೆಗಾಲದ ನಂತರ ಡಾಂಬರೀಕರಣ ಕೆಲಸವನ್ನು ಪೂರ್ಣಗೊಳಿಸಲಾಗುವುದು

ಶ್ರೀ ಪಾಟೀಲ್ ಎಸ್ ಎಸ್ (ಮುಂಡರಗಿ)125(102)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಶಿಕ್ಷಕರ ವರ್ಗಾವಣೆ ಕಾಯಿದೆ ಜಾರಿಯಲ್ಲಿ ಬಂದಿದೆಯೇ,

ಆ) ಇಲ್ಲವಾದಲ್ಲಿ, ಇದಕ್ಕೆ ಕಾರಣವೇನು?

ಶ್ರೀ ಎಸ್ ಬಸವರಾಜ ಹೊರಟ್ಟಿ

ಅ) ಪ್ರಸ್ತುತ ಜಾರಿಯಲ್ಲಿರುವುದಿಲ್ಲ

ಆ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧ್ಯಾದೇಶ, 2006ನ್ನು ರಾಜ್ಯ ವಿಧಾನಮಂಡಲದ ಎರಡೂ ಸದನಗಳು ಅನಮೋದಿಸುವ ಅಗತ್ಯತೆ ಇರುತ್ತದೆ